| ಖಾಸಗಿ ಪಾಲಿಟೆಕ್ನಿಕ್‌ಗೆ ಅನ್ವಯವಾಗುವಂತೆ | | ಬೋಧನಾ ಶುಲ್ಕ | ಅಭಿವೃದ್ಧಿ ಶುಲ್ಕ | ಇತರೆ ಶುಲ್ಕ | ಒಟ್ಟು |
|---|---|---|---|---|---|
| ಅ)ಕರ್ನಾಟಕದ ಅಭ್ಯರ್ಥಿಗಳಿಗೆ | - | ರೂ. 12,075/- | ರೂ. 500/- | ರೂ. 830/- | **ರೂ. 13,405/-** |
| ಆ)ಕರ್ನಾಟಕೇತರ ಅಭ್ಯರ್ಥಿಗಳಿಗೆ | - | ರೂ. 19,425/- | ರೂ. 500/- | ರೂ. 830/- | **ರೂ. 20,755/-** |

- ❖ ಪ್ರತಿ ಸಂಸ್ಥೆಯು ಕನಿಷ್ಠ ಒಂದಾದರೂ (ಇಲಾಖೆಯಿಂದ ಎನ್.ಎಸ್.ಎಸ್ ಅನುದಾನ ಪಡೆಯುವ ಘಟಕವಾಗಲೀ/ಸ್ವ-ಆರ್ಥಿಕ ಘಟಕವಾಗಲೀ) ಘಟಕವನ್ನು ಖಡ್ಡಾಯವಾಗಿ ಹೊಂದಿರಬೇಕು.
- ❖ ಇಲಾಖೆಯಿಂದ ಎನ್.ಎಸ್.ಎಸ್ ಅನುದಾನ ಪಡೆಯುವ ಘಟಕವನ್ನು ಈಗಾಗಲೇ ಹೊಂದಿರುವ ಸಂಸ್ಥೆಗಳು ಸ್ವ-ಆರ್ಥಿಕ ಘಟಕವನ್ನು ಸಹ ಸ್ಥಾಪಿಸುವುದಿದ್ದರೇ ಮಾತ್ರ ಮೇಲ್ಕಂಡ ಶುಲ್ಕದ ಜೊತೆಗೆ ರೂ.40/-ನ್ನು ಎಲ್ಲಾ ವಿದ್ಯಾರ್ಥಿಗಳಿಂದ ಪ್ರವೇಶ ಸಮಯದಲ್ಲಿ ಪಾವತಿಸಿಕೊಳ್ಳತಕ್ಕದ್ದು.
- ❖ ಎನ್.ಎಸ್.ಎಸ್ ಘಟಕವನ್ನು ಈವರೆಗೂ ಹೊಂದಿಲ್ಲದ ಸಂಸ್ಥೆಗಳು ಸ್ವ-ಆರ್ಥಿಕ ಎನ್.ಎಸ್.ಎಸ್ ಘಟಕ ಸ್ಥಾಪಿಸಲು ಮೇಲ್ಕಂಡ ಶುಲ್ಕದ ಜೊತೆಗೆ ಈ ವರ್ಷಕ್ಕೆ ಮಾತ್ರ ರೂ.50/- ನ್ನು ಎಲ್ಲಾ ವಿದ್ಯಾರ್ಥಿಗಳಿಂದ ಪ್ರವೇಶ ಸಮಯದಲ್ಲಿ ಪಾವತಿಸಿಕೊಳ್ಳತಕ್ಕದು (ಮುಂದಿನ ವರ್ಷದಿಂದ ರೂ.40/-).

**13. ಪ್ರವೇಶಕ್ಕೆ ನಿಗಧಿಪಡಿಸಿರುವ ಅಂತಿಮ ದಿನಾಂಕ:-**

ಕರ್ನಾಟಕ ಸರ್ಕಾರ ಹಾಗೂ ಎಐಸಿಟಿಇಯಿಂದ ಮಾನ್ಯತೆ ಪಡೆದ ರಾಜ್ಯದಲ್ಲಿನ ಎಲ್ಲಾ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ಪ್ರಥಮ ಡಿಪ್ಲೋಮಾ ಕೋರ್ಸಿಗೆ **ದಿನಾಂಕ:31-05-2025** ರವರೆಗೆ ಪ್ರವೇಶ ಮಾಡಿಕೊಳ್ಳುವ ಅವಕಾಶ ನೀಡಲಾಗಿದೆ. ಪ್ರಯುಕ್ತ, ಮೇಲ್ಕಂಡ ದಿನಾಂಕದೊಳಗೆ ಪ್ರವೇಶವನ್ನು ಮುಗಿಸುವ ವ್ಯವಸ್ಥೆ ಮಾಡಿಕೊಳ್ಳುವುದು.

ಪ್ರಯುಕ್ತ, ತಮ್ಮ ಸಂಸ್ಥೆಯಲ್ಲಿನ ಸೀಟುಗಳನ್ನು ಸ್ವ-ಇಚ್ಚೆಯಿಂದ ಸರ್ಕಾರಕ್ಕೆ ಬಿಟ್ಟು ಕೊಟ್ಟಂತಹ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳು ಅಂತಹ ಸೀಟುಗಳನ್ನು ಯಾವುದೇ ಕಾರಣಕ್ಕೆ ತಮ್ಮ ಹಂತದಲ್ಲಿ ಪ್ರವೇಶಾತಿಯನ್ನು ನೀಡತಕ್ಕದ್ದಲ್ಲ ಹಾಗೂ ಸ್ವ-ಇಚ್ಚೆಯಿಂದ ಸರ್ಕಾರಕ್ಕೆ ಬಿಟ್ಟು ಕೊಟ್ಟಂತಹ ಸೀಟುಗಳನ್ನು ಹೊರತುಪಡಿಸಿ ಇನ್ನುಳಿದ ಸೀಟುಗಳಿಗೆ ಮಾತ್ರ ಪ್ರವೇಶ ನೀಡತಕ್ಕದ್ದು. ಈ ನಿಯಮಗಳನ್ನು ಉಲ್ಲಂಘಿಸಿ ಪ್ರವೇಶ ಮಾಡಿದಂತಹ ಸಂದರ್ಭಗಳಿಗೆ ಆಯಾ ಪಾಲಿಟೆಕ್ನಿಕ್‌ನ ಆಡಳಿತ ಮಂಡಳಿ ಹಾಗೂ ಪ್ರಿನ್ಸಿಪಾಲರೇ ಸಂಪೂರ್ಣ ಜವಾಬ್ದಾರರಾಗಿರುತ್ತಾರೆ.

*ಚಾಲ್ತಿಯಲ್ಲಿರುವ ವಿವಿಧ ನಿಯಮಗಳು ಮತ್ತು ಸರ್ಕಾರಿ ಆದೇಶಗಳಲ್ಲಿ ಸೂಚಿಸಿರುವ ಅಂಶಗಳನ್ನು ಸ್ಪಷ್ಟವಾಗಿ ಗಮನದಲ್ಲಿರಿಸಿಕೊಂಡು ವಿದ್ಯಾರ್ಥಿಗಳ ಪ್ರವೇಶ ಮಾಡಿಕೊಳ್ಳಬೇಕೆಂದು ಹಾಗೂ ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ಸಂಸ್ಥೆಗಳ ಪ್ರಾಂಶುಪಾಲರುಗಳಿಗೆ ತಿಳಿಸಲಾಗಿದೆ.*

Manjula

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

ಇವರಿಗೆ,

*ಎಲ್ಲಾ ಖಾಸಗಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ - ಮಾಹಿತಿಗಾಗಿ ಮತ್ತು ಸೂಕ್ತ ಅನುಸರಣೆಗಾಗಿ,*